ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 13-04-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಸ್ಮರಣಾರ್ಥ ಕವಾಯತು ಅಗ್ನಿಶಾಮಕ ಸೇವಾ ಸ್ಮರಣೆ –2016<br><br>ಭಾಗವಹಿಸುವಿಕೆ:<br><br>ಶ್ರೀ ಎಂ. ಎನ್. ರೆಡ್ಡಿ, ಐ.ಪಿ.ಎಸ್.<br><br>ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ಸಮಾದೇಷ್ಟರು, ಗೃಹರಕ್ಷಣ ದಳ, ನಿರ್ದೇಶಕರು ಪೌರ ರಕ್ಷಣೆ, ಮಹಾ ನಿರ್ದೇಶಕರು, ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ಮಹಾ ನಿರ್ದೇಶಕರು | **14-04-2016**<br>ಗುರುವಾರ<br>ಬೆಳಿಗ್ಗೆ<br>9–00 ಗಂಟೆಗೆ | ಬನ್ನೇರುಘಟ್ಟರಸ್ತೆಯಲ್ಲಿರುವ ಆರ್.ಎ. ಮುಂಡ್ಕುರ್ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಅಕಾಡೆಮಿ ಆವರಣ<br><br>ಬೆಂಗಳೂರು |
| 2. | ಸಂವಿಧಾನಶಿಲ್ಪಿ, ಭಾರತರತ್ನ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 125ನೇ ಜನ್ಮ ದಿನಾಚರಣೆ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ:<br><br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ | **14-04-2016**<br>ಗುರುವಾರ<br>ಬೆಳಿಗ್ಗೆ<br>10–30 ಗಂಟೆಗೆ | ವಿಧಾನಸೌಧ,<br>ಬೆಂಗಳೂರು. |
| | ಸಂವಿಧಾನಶಿಲ್ಪಿ ಬಾಬಾಸಾಹೇಬ್ ಡಾ. ಬಿ. ಆರ್. ಅಂಬೇಡ್ಕರ್ ಅವರ 125ನೇ ಜನ್ಮ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ:<br><br><u>ಉದ್ಘಾಟನೆ:</u><br><br>ಸಿದ್ದರಾಮಯ್ಯ, | 10–40 ಗಂಟೆಗೆ | ಬ್ಯಾಂಕ್ವೆಟ್ ಹಾಲ್,<br>ವಿಧಾನಸೌಧ, ಬೆಂಗಳೂರು. |

| | | | |
|---|---|---|---|
| | ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ<br><br><u>ಅಧ್ಯಕ್ಷತೆ:</u><br><br>ಹೆಚ್. ಆಂಜನೇಯ,<br>ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.<br><br><u>ಉಪನ್ಯಾಸ:</u><br><br>ಡಾ. ಸಿದ್ದಲಿಂಗಯ್ಯ,<br>ಖ್ಯಾತ ಕವಿ,<br>ಅಧ್ಯಕ್ಷರು,<br>ಅಂಬೇಡ್ಕರ್ ಪ್ರಶಸ್ತಿ ಆಯ್ಕೆ ಸಮಿತಿ | | |
| 2. | ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕರ್ನಾಟಕ ಕೈಗಾರಿಕಾ ಮತ್ತು ವಾಣಿಜ್ಯೋದ್ಯಮ ಕನ್ನಡ ಸಂಘಗಳ ಒಕ್ಕೂಟದ ಸಹಯೋಗದೊಂದಿಗೆ ಕನ್ನಡ–ಕನ್ನಡಿಗ–ಕರ್ನಾಟಕ ವರದಿಗಳ ಕೃತಿ ಲೋಕಾರ್ಪಣೆ:<br><br><u>ಪ್ರಾಸ್ತಾವಿಕ ನುಡಿ:</u><br><br>ಡಾ. ಎಲ್. ಹನುಮಂತಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ.<br><br><u>ಕೃತಿ ಬಿಡುಗಡೆ:</u><br><br>ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ, ಮಾಜಿ ಲೋಕಾಯುಕ್ತರು.<br><br><u>ಅಧ್ಯಕ್ಷತೆ:</u><br><br>ಡಾ. ಮುಖ್ಯಮಂತ್ರಿ ಚಂದ್ರು,<br>ನಿಕಟಪೂರ್ವ ಅಧ್ಯಕ್ಷರು,<br>ಕನ್ನಡ ಅಭಿವೃದ್ಧಿ ಪ್ರಾಧಿಕಾರ | **14-04-2016**<br>ಗುರುವಾರ<br>ಬೆಳಿಗ್ಗೆ<br>11–00 ಗಂಟೆಗೆ | ಶ್ರೀ ಕೃಷ್ಣರಾಜ ಪರಿಷನ್ಮಂದಿರ, ಕನ್ನಡ ಸಾಹಿತ್ಯ ಪರಿಷತ್ತು, ಚಾಮರಾಜಪೇಟೆ, ಬೆಂಗಳೂರು. |

ನಿರ್ದೇಶಕರ ಪರವಾಗಿ

<u>ಪತ್ರಿಕಾ ಪ್ರಕಟಣೆ</u>

## <u>ಮುಖ್ಯಮಂತ್ರಿ ಪ್ರವಾಸ</u>

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏಪ್ರಿಲ್ 15 ರಿಂದ 18 ರವರೆಗೆ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಗದಗ, ವಿಜಯಪುರ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು, ಏಪ್ರಿಲ್ 18 ರಂದು ನಗರಕ್ಕೆ ಹಿಂದಿರುಗುವರು.

ಪಿಎಸ್ಐ:ಜಿಪಿಆರ್

## ಡಾ. ಬಿ.ಆರ್. ಅಂಬೇಡ್ಕರ್ ಅವರ 125ನೇ ಜನ್ಮ ದಿನಾಚರಣೆ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಏಪ್ರಿಲ್ 14 ರಂದು ಬೆಳಿಗ್ಗೆ 10-40 ಗಂಟೆಗೆ ಸಂವಿಧಾನಶಿಲ್ಪಿ ಭಾರತರತ್ನ ಬಾಬಾಸಾಹೇಬ್ ಡಾ. ಬಿ.ಆರ್. ಅಂಬೇಡ್ಕರ್ ಅವರ 125 ಜನ್ಮ ದಿನಾಚರಣೆಯನ್ನು ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಂಡಿದೆ.

ಅಂದು ಬೆಳಿಗ್ಗೆ 10-30 ಗಂಟೆಗೆ ವಿಧಾನಸೌಧದ ಬಳಿಯಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾಲಾರ್ಪಣೆ ಮಾಡಲಿದ್ದಾರೆ.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿರುವ ಸಾರ್ವಜನಿಕ ಸಮಾರಂಭವನ್ನು ಬೆಳಿಗ್ಗೆ 10-40 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿದ್ದಾರೆ. ಈ ಸಮಾರಂಭದ ಅಧ್ಯಕ್ಷತೆಯನ್ನು ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್.ಆಂಜನೇಯ ಅವರು ವಹಿಸಲಿದ್ದಾರೆ. ಖ್ಯಾತ ಕವಿ ಹಾಗೂ ಅಂಬೇಡ್ಕರ್ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರಾದ ಡಾ. ಸಿದ್ದಲಿಂಗಯ್ಯ ಅವರು ಉಪನ್ಯಾಸವನ್ನು ಮಾಡಲಿದ್ದಾರೆ.

ಸಮಾರಂಭದಲ್ಲಿ ಕೇಂದ್ರದ ಸಚಿವರು, ರಾಜ್ಯ ಸಚಿವ ಸಂಪುಟದ ಸದಸ್ಯರು, ಲೋಕಸಭಾ ಸದಸ್ಯರು, ರಾಜ್ಯಸಭಾ ಸದಸ್ಯರು, ವಿಧಾನಸಭಾ ಸದಸ್ಯರು, ಕರ್ನಾಟಕ ವಿಧಾನ ಪರಿಷತ್ ಹಾಗೂ ವಿಧಾನಸಭೆಯ ನಾಯಕರು, ವಿರೋಧ ಪಕ್ಷದ ನಾಯಕರು ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಪಿಎಸ್ಐ:ಜಿಪಿಆರ್

## ಪ್ರಸಕ್ತ ಸಾಲಿನ ಡಾ. ಅಂಬೇಡ್ಕರ್ ಪ್ರಶಸ್ತಿಗೆ ಡಾ. ಎಸ್. ಚಿನ್ನಸ್ವಾಮಿ ಮಾಂಬಳ್ಳಿ ಆಯ್ಕೆ –

– ಸಚಿವ ಹೆಚ್. ಆಂಜನೇಯ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

ಪರಿಶಿಷ್ಟ ಜಾತಿ ಮತ್ತು ವರ್ಗಗಳ ಶ್ರೇಯೋಭಿವೃದ್ಧಿಗಾಗಿ ಸಲ್ಲಿಸಿರುವ ಗಮನಾರ್ಹ ಸೇವೆಯನ್ನು ಪರಿಗಣಿಸಿ ಪ್ರಸಕ್ತ ಸಾಲಿನಲ್ಲಿ ನೀಡುವ ಡಾ. ಅಂಬೇಡ್ಕರ್ ಪ್ರಶಸ್ತಿಯನ್ನು ಡಾ. ಎಸ್. ಚಿನ್ನಸ್ವಾಮಿ ಮಾಂಬಳ್ಳಿ ಅವರಿಗೆ ನೀಡಲಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆ ಇಂದು ಮಾತನಾಡಿದ ಸಚಿವರು ಡಾ. ಸಿದ್ದಲಿಂಗಯ್ಯ ಅವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯು ಚಾಮರಾಜನಗರ ಜಿಲ್ಲೆಯ ಡಾ. ಎಸ್. ಚಿನ್ನಸ್ವಾಮಿ ಅವರನ್ನು ಆಯ್ಕೆಮಾಡಿದೆ ಎಂದರು.

ಸಂವಿಧಾನ ಶಿಲ್ಪಿ ಭಾರತರತ್ನ, ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 125 ನೇ ಜನ್ಮ ದಿನಾಚರಣೆಯನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸಲು ಸರ್ಕಾರ ಮುಂದಾಗಿದೆ ಎಂದ ಸಚಿವರು ರಾಜ್ಯದ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಡಾ. ಅಂಬೇಡ್ಕರ್ ಅವರ ಕುರಿತಂತೆ ನಾಟಕ ಪ್ರದರ್ಶನ ಸಾಕ್ಷ್ಯಚಿತ್ರ ಪ್ರದರ್ಶನಗಳು, ಅವರು ಹೊರತಂದಿರುವ ಪ್ರಮುಖ ಪುಸ್ತಕಗಳ ಕನ್ನಡಕ್ಕೆ ಅನುವಾದ ಮಾಡಿ ಕಡಿಮೆ ವೆಚ್ಚದಲ್ಲಿ ಪುಸ್ತಕಗಳನ್ನು ವಿತರಿಸಲಾಗುವುದು ಹಾಗೂ ಮೇಲುಕೀಳು ಎಂಬ ಭಾವನೆಯನ್ನು ತೊಡೆದು ಹಾಕುವಂತಹ ಸಾಮಾಜಿಕ ಕಳಕಳಿ ಇರುವಂತಹ "ಮನುಷ್ಯ ಜಾತಿ ತಾನೊಂದೇವಲಂ ನಾಟಕವನ್ನು ಪ್ರದರ್ಶಿಸಲಾಗುವುದು ಎಂದು ತಿಳಿಸಿದರು.

ಡಾ ಅಂಬೇಡ್ಕರ್ ಅವರ 125 ಜನ್ಮ ದಿನಾಚರಣೆ ಅಂಗವಾಗಿ ಸರಳವಾಗಿ ಮದುವೆಯಾಗುವ ಪರಿಶಿಷ್ಟ ಜಾತಿ/ಪಂಗಡಗಳ ವಧೂವರರಿಗೆ ಸರ್ಕಾರ ರೂ. 50 ಸಾವಿರ ಪ್ರೋತ್ಸಾಹ ಧನ ನೀಡಲಿದ್ದು, ಪರಿಶಿಷ್ಟ ಜಾತಿ ಹೆಣ್ಣು ಮಗಳು ಅನ್ಯ ಜಾತಿಯವರನ್ನು ಮದುವೆಯಾದಲ್ಲಿ ಮೂರು ಲಕ್ಷ ರೂ. ಪ್ರೋತ್ಸಾಹ ಧನ ಹಣ ನೀಡಲಾಗುವುದು. ಅನ್ಯ ಜಾತಿಯನ್ನು ಪರಿಶಿಷ್ಟ, ಪರಿಶಿಷ್ಟ ಪಂಗಡದವರನ್ನು ಮದುವೆಯಾದಲ್ಲಿ ರೂ. 2 ಲಕ್ಷ ಪ್ರೋತ್ಸಾಹ ಧನ ನೀಡಲಾಗುವುದು ಎಂದು ಸಚಿವರು ತಿಳಿಸಿದರು.

ಸರ್ಕಾರ ರಾಜ್ಯದ ನಾಲ್ಕು ಭಾಗಗಳಲ್ಲೂ ಸರಳ ವಿವಾಹ ಹಾಗೂ ಅಂತರ್ಜಾತಿ ವಿವಾಹಗಳನ್ನು ಮಾಡಲು ಚಿಂತನೆ ನಡೆಸಿದ್ದು, ಈ ಸಂಬಂಧ ಪ್ರಮುಖ ಮಠಾಧೀಶರನ್ನು ಮನವಿ ಮಾಡಲಾಗಿದೆ ಎಂದ ಸಚಿವರು ಇದೇ ತಿಂಗಳ 15 ರಂದು ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನ ಮುಲ್ಕಿ ಹೋಬಳಿಯ ಪಡಪೆಣಂಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ "ಕೆರೆಕಾಡು ಕೊರಗರ ಕಾಲೋನಿ" ಹಾಗೂ ಸುತ್ತಮುತ್ತಲ ಗಿರಿಜನ ಹಾಡಿಯಲ್ಲಿ ವಾಸ್ತವ್ಯ ಹೂಡಲಾಗುವುದು ಎಂದರು. ಪ್ರಶಸ್ತಿ ಪುರಸ್ಕೃತ ಡಾ: ಚಿನ್ನಸ್ವಾಮಿ ಮಾಂಬಳ್ಳಿ ಅವರಿಗೆ ನಾಡೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿರುವ

ರಾಜ್ಯದಲ್ಲಿ ಈಗಾಗಲೇ ನಡೆದಿರುವ ಜಾತಿಗಣತಿ ಸಮೀಕ್ಷಾ ವರದಿ ಸೋರಿಕೆಯಾಗಿಲ್ಲ ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು.

ಡಾ. ಅಂಬೇಡ್ಕರ್ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರಾದ ಡಾ. ಸಿದ್ದಲಿಂಗಯ್ಯ, ಸಮಿತಿಯ ಸದಸ್ಯರು, ಸಮಾಜ ಕಲ್ಯಾಣ ಇಲಾಖೆಯ ಸಲಹೆಗಾರರಾದ ವೆಂಕಟಯ್ಯ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಗಂಗರಾಮ್ ಬಡೇರಿಯಾ ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕೆಪಿಪಿ/ಪಿಎಸ್ಐ:ಜಿಪಿಆರ್

## ಅಗ್ನಿಶಾಮಕ ಸೇವಾ ಸಪ್ತಾಹ

ಬೆಂಗಳೂರು, ಏಪ್ರಿಲ್ 13 (ಕರ್ನಾಟಕ ವಾರ್ತೆ)

14ನೇ ಏಪ್ರಿಲ್–1914 ರಂದು ಮುಂಬೈನ ವಿಕ್ಟೋರಿಯಾ ಡಾಕ್ ಬಂದರಿನಲ್ಲಿ ಸ್ಫೋಟಕ ವಸ್ತುಗಳನ್ನು ತುಂಬಿದ್ದ ಎಸ್.ಎಸ್. ಪೋರ್ಟ್ ಸ್ಟೈಕೈನ್" ಎಂಬ ಹಡಗು ಘೋರ ಅಗ್ನಿ ಅನಾಹುತಕ್ಕೆ ಒಳಗಾಗಿದ್ದು, ಆ ಬೆಂಕಿಯನ್ನು ನಂದಿಸಲು ಮುಂಬೈ ಫೈರ್ ಬ್ರಿಗೇಡ್‌ನ ಅಧಿಕಾರಿ/ಸಿಬ್ಬಂದಿಯವರು ಕಾರ್ಯ

ನಿರತರಾಗಿದ್ದ ಸಂದರ್ಭದಲ್ಲಿ ಹಡಗು ಸ್ಫೋಟಗೊಂಡು 66 ಜನ ಅಧಿಕಾರಿ ಮತ್ತು ಸಿಬ್ಬಂದಿಗಳು ವೀರ ಮರಣ ಹೊಂದಿದರು. ಈ ಹುತಾತ್ಮರ ನೆನಪಿಗಾಗಿ ಏಪ್ರಿಲ್–14 ರಂದು ಹುತಾತ್ಮರ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಪ್ರತಿ ವರ್ಷ ಏಪ್ರಿಲ್ –14 ರಿಂದ 20 ರ ವರೆಗೆ ಸಪ್ತಾಹವನ್ನು ದೇಶಾದ್ಯಂತ ಸಾರ್ವಜನಿಕರಿಗೆ ಅಗ್ನಿ ಅನಾಹುತ ಬಗ್ಗೆ ಮುಂಜಾಗ್ರತೆ ಕ್ರಮಗಳ ತಿಳಿಸಲು ಅಗ್ನಿಶಾಮಕ ಸೇವಾ ಸಪ್ತಾಹವನ್ನಾಗಿ ಆಚರಿಸಲಾಗುತ್ತಿದೆ. ಈ ಸಪ್ತಾಹದಲ್ಲಿ ಸಾರ್ವಜನಿಕರಿಗೆ ಅಗ್ನಿ ಸುರಕ್ಷತೆಯ ಬಗ್ಗೆ ತಿಳುವಳಿಕೆಯನ್ನು ನೀಡಿ, ಅಗ್ನಿಶಮನ ವಿಚಾರಗಳ ಬಗ್ಗೆ ಅಣಕು ಪ್ರದರ್ಶನಗಳನ್ನು ಆಯೋಜಿಸಲಾಗುತ್ತಿದೆ. ದೇಶದಾದ್ಯಂತ ಸಪ್ತಾಹದ ಮೊದಲ ದಿನವಾದ ಏಪ್ರಿಲ್ –14 ರಂದು ಸಾರ್ವಜನಿಕರ ಪ್ರಾಣ ಮತ್ತು ಆಸ್ತಿ ರಕ್ಷಣಾ ಕಾರ್ಯದಲ್ಲಿ ತಮ್ಮ ಪ್ರಾಣವನ್ನು ಬಲಿದಾನಗೈದು ಅಮರರಾದ ವೀರ ಅಗ್ನಿಶಾಮಕರಿಗೆ ಶ್ರದ್ಧಾಂಜಲಿಯನ್ನು ಅರ್ಪಿಸಲಾಗುತ್ತಿದೆ.

ಕೆಎಂ